# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಲಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 22 | Pages. 2 | Date: 18-12-2025, THURSDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 22 - ಪುಟಗಳು : 2 | 18-12-2025 | ಗುರುವಾರ | Ph: 8762954248 | ದರ : ₹1


# ಮೆಕ್ಕೆಜೋಳ ಖರೀದಿಗೆ ಕೆಎಂಎಫ್ ಕಳ್ಳಾಟ

## ಅನ್ನದಾತರ ಆಕ್ರೋಶ | ಅಧಿಕಾರಿಗಳೊಂದಿಗೆ ಮಾತಿನ ಚಕಮಕಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ರೈತರ ನಿರಂತರ ಹೋರಾಟದ ಬಳಿಕ ಪ್ರತಿ ರೈತರಿಂದ 50 ಕ್ವಿಂಟಾಲ್ ಮೆಕ್ಕೆಜೋಳ ಖರೀದಿಸಬೇಕು ಎಂದು ರಾಜ್ಯ ಸರ್ಕಾರ ಆದೇಶಿಸಿದ್ದರೂ ಕರ್ನಾಟಕ ಹಾಲು ಮಹಾಮಂಡಳ ಖರೀದಿ ಮಾಡುತ್ತಿಲ್ಲ ಎಂದು ಆರೋಪಿಸಿ ಬುಧವಾರ ರೈತರು ತೀವ್ರ ಪ್ರತಿಭಟನೆ ನಡೆಸಿದರು. ನಗರದ ಹೊಳೆನರಸೀಪುರ ರಸ್ತೆಯಲ್ಲಿರುವ ಪಶು ಆಹಾರ ಘಟಕ ಎದುರು ಜಮಾಯಿಸಿದ ನೂರಾರು ರೈತರು ಕೇಂದ್ರಕ್ಕೆ ಮುತ್ತಿಗೆ ಹಾಕಿ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಮಧ್ಯವರ್ತಿಗಳಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಅನ್ನದಾತರಿಗೆ ಮೋಸ ಮಾಡುತ್ತಿದ್ದಾರೆ. ಸರ್ಕಾರದ ಆದೇಶವನ್ನು ಧಿಕ್ಕರಿಸುವ ಮಟ್ಟಕ್ಕೆ ಅಧಿಕಾರಿಗಳು ಬೆಳೆದಿದ್ದಾರೆ ಎಂದು ಧಿಕ್ಕಾರ ಕೂಗಿದರು.

ಆರಂಭದಲ್ಲಿ ಸರ್ಕಾರ ಪ್ರತಿ ರೈತರಿಂದ 20 ಕ್ವಿಂಟಾಲ್ ಮಾತ್ರ ಖರೀದಿಗೆ ಸೂಚಿಸಿತ್ತು. ನಂತರ ರಾಜ್ಯಾದ್ಯಂತ ಹೋರಾಟ ತೀವ್ರಗೊಂಡಿದ್ದರಿಂದ ಡಿ. 7 ರಂದು ಖರೀದಿ ಮಿತಿಯನ್ನು 50 ಕ್ವಿಂಟಾಲ್‌ಗೆ ವಿಸ್ತರಿಸಿತ್ತು.

ಆದರೂ 20 ಕ್ವಿಂಟಾಲ್ ಮಾತ್ರ ಖರೀದಿ ಮಾಡಲಾಗುತ್ತಿದೆ. ರೈತರಿಗೆ ಟೋಕನ್ ನೀಡದೆ, ದಲ್ಲಾಳಿಗಳಿಗೆ ಟೋಕನ್ ನೀಡಲಾಗುತ್ತಿದೆ ಎಂದು ಆರೋಪಿಸಿದರು.

ರೈತರು, ವಿವಿಧ ರಾಜಕೀಯ ಪಕ್ಷಗಳು ಹೋರಾಟಕ್ಕೆ ಮಣಿದ ರಾಜ್ಯ ಸರ್ಕಾರ ಕೆಎಂಎಫ್‌ನಿಂದ 10 ಸಾವಿರ ಮೆಟ್ರಿಕ್ ಟನ್ ಮೆಕ್ಕೆಜೋಳ ಖರೀದಿಸುವಂತೆ ಸೂಚನೆ ನೀಡಿತ್ತು. ಅದರಂತೆ ಹಾಸನ ಕೆಎಂಎಫ್ ಪಶು ಆಹಾರ ಕೇಂದ್ರದಲ್ಲಿ ಮಂಗಳವಾರದವರೆಗೂ 9 ಸಾವಿರ ಮೆಟ್ರಿಕ್ ಟನ್ ಖರೀದಿಸಿದ್ದು ಉಳಿದ ಒಂದು ಸಾವಿರ ಮೆಟ್ರಿಕ್ ಟನ್ ಜೋಳವನ್ನು ರೈತರಿಂದ ಖರೀದಿಸದಿರಲು ಹಾಸನ ಕೆಎಂಎಫ್ ಮುಂದಾಗಿದೆ. ಅದನ್ನು ಕಂಡ ಕೆಎಂಎಫ್ ಅಧಿಕಾರಿಗಳು ಮಂಗಳವಾರವೇ ಒಂದು ಸಾವಿರ ಮೆಟ್ರಿಕ್ ಟನ್ ಖರೀದಿಸಲಾಗಿದೆ ಎಂದು ಹೇಳಿದ್ದರಿಂದ ಕೆರಳಿದ ರೈತರು ಅಧಿಕಾರಿಗಳ ವಿರುದ್ಧ ಕಿಡಿಕಾರಿದರು.

ರೈತರ ಫಸಲು ಬರುವ ಮುನ್ನವೇ ದಲ್ಲಾಳಿಗಳಿಂದ 23 ಸಾವಿರ ಮೆಟ್ರಿಕ್ ಟನ್ ಜೋಳ ಖರೀದಿ ಮಾಡಿದ್ದು, ಅದರಿಂದ ರೈತರಿಗೆ ಅನ್ಯಾಯವಾಗುತ್ತಿದೆ. ಕೂಡಲೇ ರೈತರಿಂದ ಜೋಳ ಖರೀದಿ ಮಾಡಬೇಕು ಇಲ್ಲವಾದಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

33 ಸಾವಿರ ಮೆಟ್ರಿಕ್ ಟನ್ ಮೆಕ್ಕೆಜೋಳ ಖರೀದಿ ಸಾಮರ್ಥ್ಯ ಹೊಂದಿರುವ ಹಾಸನ ಕೆಎಂಎಫ್ ರೈತರ ಫಸಲು ಬರುವ ಮುನ್ನವೇ ದಲ್ಲಾಳಿಗಳಿಂದ 23 ಸಾವಿರ ಮೆಟ್ರಿಕ್ ಟನ್ ಜೋಳ ಖರೀದಿ ಮಾಡಿದೆ.

### ಮಧ್ಯವರ್ತಿಗಳಿಗೆ ನೆರವಾಗುವ ಹುನ್ನಾರ

ಹಾಸನ ಪಶು ಆಹಾರ ಘಟಕಕ್ಕೆ ಪ್ರತಿವರ್ಷ 33 ಸಾವಿರ ಮೆಟ್ರಿಕ್ ಟನ್ ಮೆಕ್ಕೆಜೋಳ ಬೇಕು. ಅಧಿಕಾರಿಗಳು ಅಷ್ಟು ಪ್ರಮಾಣದ ಜೋಳ ದಾಸ್ತಾನಿದೆ. ಸರ್ಕಾರದ ನಿರ್ದೇಶನದ ಮೇರೆಗೆ 10 ಸಾವಿರ ಮೆಟ್ರಿಕ್ ಟನ್ ಖರೀದಿಸುತ್ತಿದ್ದೇವೆಂದು ಹೇಳುತ್ತಿದ್ದಾರೆ. ಆದರೆ ಮಧ್ಯವರ್ತಿಗಳಿಂದ ಖರೀದಿಗೆ ಟೆಂಡರ್ ಆಹ್ವಾನಿಸಿದ್ದಾರೆ ಎನ್ನಲಾಗಿದೆ.

ರೈತರಿಂದ ಖರೀದಿಸಿದರೆ ಪ್ರತಿ ಕ್ವಿಂಟಾಲ್‌ಗೆ ನಿಗದಿಪಡಿಸಿರುವ 2400 ರೂ. ರೈತರ ಬ್ಯಾಂಕ್ ಖಾತೆಗೆ ಜಮೆಯಾಗುತ್ತದೆ. ಅದರಿಂದ ಅಧಿಕಾರಿಗಳಿಗೆ ಕಮಿಷನ್ ಸಿಗುವುದಿಲ್ಲ. ಮಧ್ಯವರ್ತಿಗಳಿಗೆ ಕೊಟ್ಟರೆ ಲಾಭ ಮಾಡಿಕೊಳ್ಳಬಹುದೆಂಬ ಉದ್ದೇಶದಿಂದ ರೈತರನ್ನು ಕಡೆಗಣಿಸುತ್ತಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು.

### ಕೊನೆಗೂ ಖರೀದಿಗೆ ಒಪ್ಪಿದ ಅಧಿಕಾರಿಗಳು

ರೈತರ ಆಕ್ರೋಶ ಕಟ್ಟೆಯೊಡೆಯುತ್ತಿದ್ದಂತೆ ಎಚ್ಚೆತ್ತ ಅಧಿಕಾರಿಗಳು ಮೆಕ್ಕೆಜೋಳ ಖರೀದಿಗೆ ಅಸ್ತು ತೋರಿದರು.

ಕೆಎಂಎಫ್ ಬಳಿ ಇರುವ ರೈತರ ಜೋಳವನ್ನು ದಿನಾಂಕ ನಿಗದಿ ಮಾಡಿ ಖರೀದಿಸುತ್ತೇವೆ. ನಿಮ್ಮ ಆಧಾರ್ ಕಾರ್ಡ್ ಹಾಗೂ ದಾಖಲೆಗಳನ್ನು ನೀಡಿ ತಿಳಿಸಿದ ದಿನಾಂಕದಂದು ಬಂದು ಮೆಕ್ಕೆಜೋಳ ನೀಡುವಂತೆ ತಿಳಿಸಿದರು. ನಂತರ ರೈತರು ಪ್ರತಿಭಟನೆ ಹಿಂಪಡೆದರು.

ಸರ್ಕಾರದ ಆದೇಶದಂತೆ ರೈತರಿಂದ ಮೆಕ್ಕೆಜೋಳ ಖರೀದಿ ಮಾಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ವೇಳೆ ರೈತರು ಹಾಗು ಅಧಿಕಾರಿಗಳ ನಡುವೆ ಮಾತಿನ ಚಕಮಕಿ ನಡೆಯಿತು. ರೈತರಿಂದಲೇ ನೇರವಾಗಿ ಜೋಳ ಖರೀದಿ ಮಾಡಬೇಕು ಎಂದು ರೈತರು ಪಟ್ಟು ಹಿಡಿದರು.

# ಅಧ್ಯಕ್ಷತೆಯಿಂದ ಶಾಸಕರು ದೂರ ಸಿಮೆಂಟ್ ಮಂಜು ಆಕ್ಷೇಪ

ಕನ್ನಡ ಪೋಸ್ಟ್ ನ್ಯೂಸ್



ಬೆಳಗಾವಿ: ಸರ್ಕಾರಿ ಕಾರ್ಯಕ್ರಮಗಳಲ್ಲಿ ಈ ವರೆಗೆ ಸ್ಥಳೀಯ ಶಾಸಕರಿಗೆ ಅಧ್ಯಕ್ಷತೆ ನೀಡುವ ಪದ್ಧತಿ ಇತ್ತಾದರೂ ಸರ್ಕಾರ ಅದಕ್ಕೆ ಕಡಿವಾಣ ಹಾಕಿ ಕೇವಲ ಮುಖ್ಯ ಅತಿಥಿಗಳ ಸ್ಥಾನಕ್ಕೆ ಸೀಮಿತಗೊಳಿಸುತ್ತಿದೆ ಎಂದು ಸಕಲೇಶಪುರ ಶಾಸಕ ಸಿಮೆಂಟ್ ಮಂಜು ಆಕ್ಷೇಪ ವ್ಯಕ್ತಪಡಿಸಿದರು. ಚಳಿಗಾಲದ ಅಧಿವೇಶನದಲ್ಲಿ ಬುಧವಾರ ವಿಷಯ ಪ್ರಸ್ತಾಪಿಸಿದ ಅವರು, ಸರ್ಕಾರಿ ಕಾರ್ಯಕ್ರಮಗಳಿಗೆ ಸಂಬಂಧಪಟ್ಟ ಕ್ಷೇತ್ರದ ಶಾಸಕರೇ ಅಧ್ಯಕ್ಷತೆ ವಹಿಸಬೇಕು ಎಂಬುದು ಪ್ರಜಾಪ್ರಭುತ್ವದ ಸಂಪ್ರದಾಯ ಹಾಗೂ ಜನಪ್ರತಿನಿಧಿಗಳ ಗೌರವದ ಸಂಕೇತ ಎಂದರು. ಸ್ಥಳೀಯ ಶಾಸಕರು ಜನರಿಂದ ನೇರವಾಗಿ ಆಯ್ಕೆಯಾಗಿರುವ ಪ್ರತಿನಿಧಿಗಳಾಗಿರುವುದರಿಂದ, ಅವರ ಕ್ಷೇತ್ರದಲ್ಲಿ ನಡೆಯುವ ಸರ್ಕಾರಿ ಕಾರ್ಯಕ್ರಮಗಳಿಗೆ ಅಧ್ಯಕ್ಷತೆ ನೀಡುವುದು ಪದ್ಧತಿ. ಅದರಿಂದ ಆಡಳಿತ ಮತ್ತು ಜನರ ನಡುವಿನ ಸಂಪರ್ಕ ಮತ್ತಷ್ಟು ಬಲಗೊಳ್ಳುತ್ತದೆ ಎಂದು ಅವರು ಅಭಿಪ್ರಾಯಪಟ್ಟರು. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಭಾಗವಹಿಸುವ ಕಾರ್ಯಕ್ರಮಗಳಲ್ಲಿ ಸ್ಥಳೀಯ ಶಾಸಕರೇ ಅಧ್ಯಕ್ಷರಾಗಿರುತ್ತಾರೆ. ಡಿ. 6 ರಂದು ಹಾಸನದಲ್ಲಿ ನಡೆದ ಸರ್ಕಾರಿ ಸೇವೆಗಳ ಸಮರ್ಪಣಾ ಸಮಾವೇಶದಲ್ಲಿ ಶಾಸಕರನ್ನು ಮುಖ್ಯ ಅತಿಥಿ ಎಂದು ನಮೂದಿಸಿರುವುದು ಬೇಸರದ ಸಂಗತಿಯಾಗಿದೆ. ಈ ಹಿಂದಿನ ಪದ್ಧತಿಯನ್ನು ಕ್ಷೇತ್ರದ ಶಾಸಕರಿಗೆ ಅಧ್ಯಕ್ಷತೆ ನೀಡುವಂತೆ ಸರ್ಕಾರ ಸ್ಪಷ್ಟ ನಿರ್ದೇಶನ ನೀಡಬೇಕೆಂದು ಶಾಸಕ ಸಿಮೆಂಟ್ ಮಂಜು ಅವರು ಸದನದ ಮೂಲಕ ಮನವಿ ಮಾಡಿದರು. ಸಭಾಪತಿ ಯು.ಟಿ. ಖಾದರ್ ಮಾತನಾಡಿ, ನಿಮ್ಮ ಭಾವನೆಗಳನ್ನು ಸ್ಪಷ್ಟವಾಗಿ ಅರ್ಥ ಮಾಡಿಕೊಂಡು ಮುಖ್ಯಮಂತ್ರಿ ಹಾಗೂ ಅಧಿಕಾರಿಗಳಿಂದ ಮಾಹಿತಿ ಪಡೆದು ಕಾನೂನು ಸಚಿವರು ಸದನದಲ್ಲಿ ಉತ್ತರ ನೀಡುತ್ತಾರೆ ಎಂದರು.

# ಅಪಘಾತದಲ್ಲಿ ಮೃತಪಟ್ಟಿದ್ದ ವ್ಯಕ್ತಿಯ ಅಂಗಾಂಗ ದಾನ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಅಪಘಾತದಲ್ಲಿ ಮೃತಪಟ್ಟಿದ್ದ ವ್ಯಕ್ತಿಯ ಅಂಗಾಂಗಗಳನ್ನು ಪೋಷಕರು ದಾನ ಮಾಡುವ ಮೂಲಕ ಮಾದರಿಯಾಗಿದ್ದಾರೆ.

ತಾಲ್ಲೂಕಿನ ಸಾಗತವಳ್ಳಿ ಗ್ರಾಮದ ನಂಜಮ್ಮ ಹಾಗೂ ನಂಜುಂಡೇಗೌಡ ದಂಪತಿಯ ಪುತ್ರ ಯೋಗೇಶ್ (35) ಡಿ. 14 ರಂದು ಪಟ್ಟಣದ ಬೈಪಾಸ್‌ನಲ್ಲಿ ನಡೆದ ಅಪಘಾತದಲ್ಲಿ ಗಂಭೀರ ಗಾಯಗೊಂಡಿದ್ದರು. ಹಾಸನದ ಖಾಸಗಿ ಆಸ್ಪತ್ರೆಗೆ ದಾಖಲಿಸಿದ್ದ ಅವರನ್ನು ಬೆಂಗಳೂರಿನ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಅಲ್ಲಿಯೂ ಚಿಕಿತ್ಸೆ ಅಸಾಧ್ಯವೆಂದು ಗೊತ್ತಾದಾಗ ಡಿ. 16ರ ಸಂಜೆ ಹಿಮ್ಸ್‌ಗೆ ದಾಖಲಿಸಲಾಗಿತ್ತು. ಮೆದುಳಿಗೆ ಬಲವಾದ ಏಟು ಬಿದ್ದಿದ್ದರಿಂದ ಯೋಗೇಶ್ ಬದುಕುಳಿಯುವುದು ಕಷ್ಟ ಎಂಬುದನ್ನು ವೈದ್ಯರು ಪೋಷಕರಿಗೆ ತಿಳಿಸಿದ್ದರು. ದುಃಖದ ಕ್ಷಣದಲ್ಲೂ ಪೋಷಕರು ಮಹತ್ವದ ನಿರ್ಧಾರ ತೆಗೆದುಕೊಂಡು ಮಗನ ಲಿವರ್ ಹಾಗೂ ಹೃದಯದ ಪಂಪ್ ವಾಲ್ವ್‌ಗಳನ್ನು ದಾನ ಮಾಡಲು ಒಪ್ಪಿದರು. ಅಂಗಾಂಗಗಳನ್ನು ಝೀರೋ ಟ್ರಾಫಿಕ್ ವ್ಯವಸ್ಥೆಯಲ್ಲಿ ಆಂಬ್ಯುಲೆನ್ಸ್ ಮೂಲಕ ಮೈಸೂರಿನ ಅಪೋಲೋ ಆಸ್ಪತ್ರೆಗೆ ರವಾನಿಸಲಾಯಿತು.

ಅಪಘಾತ, ಶಸ್ತ್ರ ಚಿಕಿತ್ಸೆ ಮತ್ತಿತರ ಸಂದರ್ಭದಲ್ಲಿ ಅಂಗಾಂಗಗಳ ಅವಶ್ಯಕತೆ ಹೆಚ್ಚಿರುತ್ತದೆ. ಸರ್ಕಾರವೇ ರಚಿಸಿರುವ ಸ್ಯಾಕ್ರೊ ಆಕ್ಸಿಪಿಟಲ್ ಟೆಕ್ನಿಕ್ ಆರ್ಗನೈಸೇಶನ್‌ನಲ್ಲಿ ಈ ಕುರಿತ ಮಾಹಿತಿ ಅಪ್ಡೇಟ್ ಆಗುತ್ತಿರುತ್ತದೆ. ತಕ್ಷಣಕ್ಕೆ ಅಂಗಾಂಗ ಬೇಕಾದಾಗ ತುರ್ತಾಗಿ ತಲುಪಿಸಲು ಝೀರೋ ಟ್ರಾಫಿಕ್ ವ್ಯವಸ್ಥೆಯನ್ನು ಬಳಸಿಕೊಳ್ಳುವ ಅವಕಾಶವಿದೆ. ಯೋಗೇಶ್ ಅವರ ಅಂಗಾಂಗಗಳು ಅತ್ಯವಶ್ಯಕವಾಗಿ ಬೇಕಿದ್ದರಿಂದ ಮೈಸೂರಿಗೆ ಶೀಘ್ರವಾಗಿ ರವಾನಿಸಲಾಯಿತು.

# ಪ್ರತಿ ಮಂಗಳವಾರ ಹಾಸ್ಟೆಲ್‌ಗಳಲ್ಲಿ ‘ಡಿಸ್ಕಸ್ ವಿಥ್ ಡಿಸಿ’

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ಜಿಲ್ಲೆಯ ವಿವಿಧ ವಸತಿ ನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರ ಅಹವಾಲು ಸ್ವೀಕರಿಸುವ ಉದ್ದೇಶದಿಂದ ಪ್ರತಿ ಮಂಗಳವಾರ ಭೇಟಿ ನೀಡುವ ಡಿಸ್ಕಸ್ ವಿಥ್ ಡಿಸಿ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಹೇಳಿದರು.

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ವತಿಯಿಂದ ಬಾಲ್ಯ ನ್ಯಾಯ, ಪೋಕ್ಸೋ ಹಾಗೂ ಮಕ್ಕಳ ಸಂರಕ್ಷಣಾ ಯೋಜನೆ ಕುರಿತು ಬುಧವಾರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಏರ್ಪಡಿಸಿದ್ದ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿ, ಮಕ್ಕಳ ಸಮಸ್ಯೆಗಳನ್ನು ಕೇವಲ ಕಚೇರಿಯಲ್ಲಿ ಕುಳಿತು ಚರ್ಚಿಸಿದರೆ ಸಾಲದು. ಮಕ್ಕಳೊಂದಿಗೆ ಬೆರೆತು, ಅವರ ನೋವುನಲಿವುಗಳನ್ನು ಅರಿತು ಪರಿಹಾರ ಕಂಡುಕೊಳ್ಳಬೇಕಿದೆ. ಹೆಣ್ಣು ಮಗಳಿಗೆ ಮದುವೆ ಮಾಡಿಕೊಟ್ಟರೆ ಜವಾಬ್ದಾರಿ ಮುಗಿಯಿತು ಎಂಬ ಮನೋಭಾವದಿಂದ ಹೊರಬಂದು, ಮಗಳಿಗೆ ಸುಂದರ ಬಾಲ್ಯ ಕಲ್ಪಿಸುವತ್ತ ಪೋಷಕರು ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳ ವಿರುದ್ಧದ ಪ್ರಕ್ರಿಯೆಯಲ್ಲಿ ನಾಗರಿಕ ಸಮಾಜದ ಪಾತ್ರ ಪ್ರಶ್ನಾರ್ಹವಾಗಿದೆ. ಪೋಕ್ಸೋ ಕಾಯ್ದೆಯಡಿ ದೂರು ದಾಖಲಾದರೂ ಕೆಲವೊಮ್ಮೆ ಅಪರಾಧಿಗಳು ಜೈಲಿನಿಂದ ಹೊರಬರುತ್ತಿರುವುದು ಮಗು ಅನುಭವಿಸುವ ನೋವಿಗೆ ಕಾರಣವಾಗುತ್ತಿದೆ. ಇಂತಹ ಹಿಂಸಾತ್ಮಕ ಕೃತ್ಯಗಳಿಗೆ ಕೊನೆ ಹಾಡಲೇಬೇಕೆಂದರು.

ಹೆಣ್ಣು ಮಕ್ಕಳಿಗೆ ಸುಂದರ ಬಾಲ್ಯ ಕಲ್ಪಿಸುವುದು ಪೋಷಕರ ಜವಾಬ್ದಾರಿ. ಮಗಳಿಗೆ 18 ವರ್ಷ ತುಂಬುವುದನ್ನೇ ಚಾತಕ ಪಕ್ಷಿಯಂತೆ ಕಾದು ಮದುವೆ ಮಾಡಿಕೊಡುತ್ತಾರೆ. ಹದಿಹರೆಯದ ವಯಸ್ಸಿನಲ್ಲಿ ಗೊತ್ತಿಲ್ಲದೆ ಆಗುವ ತಪ್ಪುಗಳನ್ನು ಪದೇ ಪದೇ ಕೆಣಕುತ್ತಾ ಅವರ ಭವಿಷ್ಯವನ್ನೇ ಹಾಳು ಮಾಡುತ್ತಾರೆ. ಈ ನಿಟ್ಟಿನಲ್ಲಿ ಎಲ್ಲರ ಮನಸ್ಥಿತಿ ಬದಲಾಗಬೇಕು ಎಂದು ಹೇಳಿದರು.

ಅಂಗವಿಕಲ ಪುನರ್ವಸತಿ ಕಾರ್ಯಕರ್ತರು ಸಮಾಜದ ಬಲವಾದ ಶಕ್ತಿಯಾಗಿದ್ದು, ಸರ್ಕಾರದ ಯೋಜನೆಗಳು ಅರ್ಹರಿಗೆ ತಲುಪಿಸುವಲ್ಲಿ ಅವರ ಪಾತ್ರ ಗಮನಾರ್ಹವಾಗಿದೆ. ಏನೇ ಸಮಸ್ಯೆಗಳಿದ್ದರೂ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳ ಗಮನಕ್ಕೆ ತರಬೇಕೆಂದರು.

ಅಂಗವಿಕಲರ ಇಲಾಖೆ ಯೋಜನಾ ನಿರ್ದೇಶಕ ಚಂದ್ರಮೌಳಿ ಮಾತನಾಡಿ, ಅಂಗವಿಕಲರಿಗಾಗಿ ಸ್ಥಳೀಯ ಸಂಸ್ಥೆಗಳಲ್ಲಿ ಶೇ. 5 ರಷ್ಟು ಅನುದಾನ ಮೀಸಲಿಡಲಾಗುತ್ತದೆ. ಆದರೆ ಎಲ್ಲಾ ಕಡೆ ಅದರ ಸದುಪಯೋಗ ಆಗುತ್ತಿಲ್ಲ. ಹಲವೆಡೆ ಪಂಚಾಯಿತಿಗಳಲ್ಲಿ ಅಂಗವಿಕಲರಿಗೆ ಕೂರಲು ಸಹ ಸೂಕ್ತ ವ್ಯವಸ್ಥೆ ಇಲ್ಲದಿರುವುದು ದುರಂತ. ಅಧಿಕಾರಿಗಳು ನೆಲಮಟ್ಟದ ಸಮಸ್ಯೆಗಳನ್ನು ಅರಿತು, ಯಾವುದೇ ಅಡಚಣೆಗಳಿದ್ದರೂ ಪರಿಹಾರ ಕಂಡುಕೊಳ್ಳುವ ಮನೋಭಾವ ಹೊಂದಬೇಕು ಎಂದರು.

ವೇದಿಕೆ ಕಾರ್ಯಕ್ರಮದ ಬಳಿಕ ಅಂಗವಿಕಲ ಪುನರ್ವಸತಿ ಕಾರ್ಯಕರ್ತರ ಅಹವಾಲು ಸ್ವೀಕಾರ ಹಾಗು ಕಾರ್ಯಾಗಾರ ನಡೆಯಿತು. ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ವೆಂಕಟೇಶ್, ಜಿಲ್ಲಾ ವಿಕಲಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಅಧಿಕಾರಿ ಕೆ.ಆರ್.ಅನುಪಮಾ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕೆ.ಜಿ. ದಿಲೀಪ್, ಕಾಂತರಾಜ್ ಹಾಗೂ ಇತರರು ಉಪಸ್ಥಿತರಿದ್ದರು.

# ಸಾಲಭಾದೆ ತಾಳಲಾರದೆ ರೈತ ಆತ್ಮಹತ್ಯೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ಸಾಲಭಾದೆ ತಾಳಲಾರದೆ ರೈತ ಆತ್ಮಹತ್ಯೆಗೆ ಶರಣಾಗಿದ್ದು 23 ದಿನಗಳ ಬಳಿಕ ಹೇಮಾವತಿ ನಾಲೆಯಲ್ಲಿ ಶವ ಪತ್ತೆಯಾಗಿದೆ.

ತಾಲೂಕಿನ ಡಿ.ಚಿಕ್ಕಗೊಂಡನಹಳ್ಳಿ ಗ್ರಾಮದ ಕಾಳೇಗೌಡ (57) ಮೃತರು. ನ. 24 ರಂದು ಮನೆಯಿಂದ ಹೊರ ಹೋಗಿದ್ದ ಅವರು ರಾತ್ರಿಯಾದರೂ ವಾಪಾಸ್ ಬಾರದ ಹಿನ್ನೆಲೆಯಲ್ಲಿ ಕುಟುಂಬಸ್ಥರು ಹುಡುಕಾಟ ನಡೆಸಿದ್ದರು. ಹೇಮಾವತಿ ಎಡದಂಡೆ ನಾಲೆ ಸಮೀಪದಲ್ಲಿ ಪಾದರಕ್ಷೆ, ಟವೆಲ್ ಹಾಗು ಜರ್ಕಿನ್ ಪತ್ತೆಯಾಗಿತ್ತು. ಶ್ರವಣಬೆಳಗೊಳ ಠಾಣೆ ಪೊಲೀಸರು ಹಾಗೂ ಅಗ್ನಿಶಾಮಕ ದಳ ಸಿಬ್ಬಂದಿ ಹುಡುಕಾಟ ನಡೆಸಿದರೂ ಮೃತದೇಹ ಪತ್ತೆಯಾಗಿರಲಿಲ್ಲ.

ಡಿ. 17ರ ಬುಧವಾರ ಶ್ರವಣಬೆಳಗೊಳ ಹೋಬಳಿ ಹೊಸಹಳ್ಳಿ ಗ್ರಾಮದ ಬಳಿ ಹೇಮಾವತಿ ನಾಲೆಯಲ್ಲಿ ಮೃತದೇಹ ಪತ್ತೆಯಾಗಿದೆ. ಮರಣೋತ್ತರ ಪರೀಕ್ಷೆ ಬಳಿಕ ಶವವನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು. ಶ್ರವಣಬೆಳಗೊಳ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಚಾಕುವಿನಿಂದ ಇರಿದು ಕೊಲೆಗೆ ಯತ್ನ


ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹಳೆಯ ದ್ವೇಷದಿಂದ ವ್ಯಕ್ತಿಯೊಬ್ಬರಿಗೆ ಚಾಕುವಿನಿಂದ ಇರಿದು ಕೊಲೆಗೆ ಯತ್ನಿಸಿರುವ ಘಟನೆ ತಾಲ್ಲೂಕಿನ ಮಾರ್ಗನಹಳ್ಳಿ ಸಮೀಪ ನಡೆದಿದೆ.

ಹಾಲುವಾಗಿಲು ಗ್ರಾಮದ ವೆಂಕಟೇಶ್ ಗಾಯಾಳು. ಅದೇ ಗ್ರಾಮದ ನಿತಿನ್ ಎಂಬಾತ ಹಲ್ಲೆ ನಡೆಸಿದ್ದಾನೆ. ಫಾರೆಸ್ಟ್ ವಾಚರ್ ಆಗಿ ಕೆಲಸ ಮಾಡಿಕೊಂಡಿರುವ ವೆಂಕಟೇಶ್ ತಣ್ಣೀರುಹಳ್ಳಕ್ಕೆ ಬೈಕ್‌ನಲ್ಲಿ ಹೋಗುತ್ತಿದ್ದಾಗ ಮಾರ್ಗನಹಳ್ಳಿ ಬಸ್ ನಿಲ್ದಾಣ ಸಮೀಪ ನಿಂತಿದ್ದ ನಿತಿನ್ ತಾನು ಹಾಸನಕ್ಕೆ ಬರುತ್ತಿದ್ದು ಡ್ರಾಪ್ ಕೊಡಿ ಎಂದು ಕೇಳಿದ್ದಾನೆ. ಬೈಕ್ ಹಿಂಬದಿ ಕುಳಿತಿದ್ದ ನಿತಿನ್ ಏಕಾಏಕಿ ಜೇಬಿನಲ್ಲಿದ್ದ ಚಾಕು ತೆಗೆದು ಬಲಭುಜ ಹಾಗೂ ಬೆನ್ನಿಗೆ ಎರಡು ಬಾರಿ ಇರಿದು ಪರಾರಿಯಾಗಿದ್ದಾನೆ. ವೆಂಕಟೇಶ್ ಅವರನ್ನು ತಕ್ಷಣವೇ ಆಸ್ಪತ್ರೆಗೆ ದಾಖಲಿಸಲಾಗಿದೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸಹೋದರನ ಆಸೆ ಈಡೇರುವುದು ಖಚಿತ: ಮಾಜಿ ಸಂಸದ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ಸಹೋದರ ಶಿವಕುಮಾರ್ ರಾಜ್ಯದ ಮುಖ್ಯಮಂತ್ರಿಯಾಗಬೇಕೆನ್ನುವುದು ಜನರ ಕನಸು. ಅವರಿಗೆ ಮುಖ್ಯಮಂತ್ರಿ ಸ್ಥಾನ ನೀಡುವ ಕುರಿತು ನಿರ್ಣಯಿಸಲು ಹೈಕಮಾಂಡ್ ಇದೆ. ಮುಂದೊಂದು ದಿನ ಆಸೆ ಈಡೇರುವುದು ಖಚಿತ ಎಂದು ಮಾಜಿ ಸಂಸದ ಡಿ.ಕೆ. ಸುರೇಶ್ ಪ್ರತಿಕ್ರಿಯಿಸಿದರು.

ಧರ್ಮಸ್ಥಳದಿಂದ ಬೆಂಗಳೂರಿಗೆ ವಾಪಸ್ಸಾಗುತ್ತಿದ್ದ ವೇಳೆ ತಾಲ್ಲೂಕಿನ ಹಿರೀಸಾವೆ ಬಳಿ ಸುದ್ದಿಗಾರರೊಂದಿಗೆ ಮಾತನಾಡಿ, ಮುಖ್ಯಮಂತ್ರಿ ಬದಲಾವಣೆ ವಿಚಾರದಲ್ಲಿ ಮಾತನಾಡುವುದು ಏನೂ ಇಲ್ಲ, ಹೈಕಮಾಂಡ್ ನಿರ್ಣಯವೇ ಅಂತಿಮ ಎಂದು ಹೇಳಿದರು.

ನಾಯಕತ್ವ ಬದಲಾವಣೆ ಕುರಿತು ಪರ-ವಿರೋಧ ಇದ್ದೇ ಇರುತ್ತದೆ. ಕಾಂಗ್ರೆಸ್‌ನಲ್ಲಿ ಯಾವ ಗೊಂದಲಗಳಿಲ್ಲ. 140 ಶಾಸಕರು ಹೈಕಮಾಂಡ್ ಆದೇಶಕ್ಕೆ ಬದ್ಧರಾಗಿರುತ್ತಾರೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹುಟ್ಟು ಹೋರಾಟಗಾರ.

ಪರಿಶ್ರಮಕ್ಕೆ ಫಲ ದೊರೆಯುತ್ತದೆಂಬ ನಂಬಿಕೆಯಿದೆ. ಬಡವರ ಪರ ಹೋರಾಡುವ ವ್ಯಕ್ತಿ. ಅವರು ರಾಜ್ಯದ ಅಭಿವೃದ್ಧಿಗಾಗಿ ಬದುಕು ಮುಡಿಪಾಗಿಟ್ಟಿದ್ದಾರೆ. ಜನಪರ ಚಿಂತನೆಯಲ್ಲಿಯೇ ದಿನ ಕಳೆಯುವ ಹಠವಾದಿ. ರಾಜ್ಯ ಕಾಂಗ್ರೆಸ್ ಪಕ್ಷದ ಉಳಿವು ಹಾಗು ಬೆಳವಣಿಗೆಗಾಗಿ ಪಣ ತೊಟ್ಟು ನಿಂತ ಫಕೀರ. ಅದೆಷ್ಟೇ ಅವಮಾನ ಎದುರಾದರೂ ಧೃತಿಗೆಡದೆ ಪಕ್ಷಕ್ಕಾಗಿ ದುಡಿಯುತ್ತಿದ್ದಾರೆ. ರಾಜ್ಯದ ಜನರಿಗೂ ಅದು ಗೊತ್ತಿದೆ ಎಂದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಉದಯ್ ಕುಮಾರ್, ಮಂಜಣ್ಣ, ಜಯಣ್ಣ, ತ್ಯಾಗರಾಜ್, ಮಹೇಶ್, ನಂಜೇಗೌಡ, ಶ್ರೀಧರ್, ಶಶಿಧರ್, ರಘು, ಪ್ರಕಾಶ್ ಇತರರಿದ್ದರು.

# 5.50 ಲಕ್ಷ ರೂ. ಪರಿಹಾರಕ್ಕಾಗಿ ಬಸ್ ಜಪ್ತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಚನ್ನರಾಯಪಟ್ಟಣ: ಅಪಘಾತದಲ್ಲಿ ಮೃತಪಟ್ಟ ಯುವತಿಯ ಕುಟುಂಬಕ್ಕೆ ಪರಿಹಾರ ನೀಡುವಲ್ಲಿ ವಿಳಂಬ ತೋರಿದ ಹಿನ್ನೆಲೆಯಲ್ಲಿ ನ್ಯಾಯಾಲಯದ ಆದೇಶದ ಮೇರೆಗೆ ಕೆಎಸ್ಆರ್‌ಟಿಸಿ ಬಸ್ ಅನ್ನು ಬುಧವಾರ ಜಪ್ತಿ ಮಾಡಲಾಯಿತು.

ಪಟ್ಟಣದ ಬಸ್ ನಿಲ್ದಾಣದಲ್ಲಿ ನಿಲ್ಲಿಸಿದ್ದ ಚಿಕ್ಕಮಗಳೂರು ಡಿಪೋಗೆ ಸೇರಿದ ಬಸ್ ಅನ್ನು ವಕೀಲರು ನ್ಯಾಯಾಲಯ ಆದೇಶ ಪ್ರತಿ ತೋರಿಸಿ ಜಪ್ತಿ ಮಾಡಿ ಕೋರ್ಟ್ ಆವರಣದಲ್ಲಿ ನಿಲ್ಲಿಸಿದರು. ತಾಲ್ಲೂಕಿನ ಪೂಮಡಿಹಳ್ಳಿ ಗ್ರಾಮದ ರಾಮಚಂದ್ರ ಹಾಗೂ ವಸಂತ ಎಂಬುವವರ ಪುತ್ರಿ ಲಲಿತಾ 15 ವರ್ಷಗಳ ಹಿಂದೆ ಅಪಘಾತದಲ್ಲಿ ಮೃತಪಟ್ಟಿದ್ದರು. ಈ ಸಂಬಂಧ ಕುಟುಂಬಸ್ಥರಿಗೆ 5.50 ಲಕ್ಷ ರೂ. ಪರಿಹಾರ ನೀಡುವಂತೆ ಜೆಎಂಎಫ್‌ಸಿ ನ್ಯಾಯಾಲಯ ಆದೇಶಿಸಿತ್ತು.

ಕೆಎಸ್ಆರ್‌ಟಿಸಿ ಪರಿಹಾರ ನೀಡಲು ವಿಳಂಬ ಮಾಡಿದ್ದರಿಂದ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲಾಗಿತ್ತು. ಅಲ್ಲಿಯೂ ಮೃತರಿಗೆ ಪರಿಹಾರ ಒದಗಿಸಬೇಕೆಂದು ಆದೇಶವಾಗಿತ್ತು. ವಕೀಲ ವೈ.ಕೆ.ಪುಟ್ಟಸ್ವಾಮಿಗೌಡ ಮತ್ತಿತರರಿದ್ದರು.

# ಪಲ್ಸ್ ಪೋಲಿಯೋ ಹನಿಯಿಂದ ಮಕ್ಕಳು ವಂಚಿತರಾಗಬಾರದು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಐದು ವರ್ಷದೊಳಗಿನ ಎಲ್ಲಾ ಮಕ್ಕಳು ಪಲ್ಸ್ ಪೋಲಿಯೊ ಲಸಿಕೆಯಿಂದ ವಂಚಿತರಾಗದಂತೆ ಸಿಬ್ಬಂದಿ ಕಾರ್ಯನಿರ್ವಹಿಸಬೇಕು ಎಂದು ತೋಟಿ ಪ್ರಾಥಮಿಕ ಆರೋಗ್ಯ ಕೇಂದ್ರ ಡಾ. ಶಂಕರಲಿಂಗೇಗೌಡ ಹೇಳಿದರು.

ತಾಲೂಕಿನ ಹಿರೀಸಾವೆ ಸರ್ಕಾರಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪಲ್ಸ್ ಪೋಲಿಯೊ ಲಸಿಕೆ ಹಾಕುವ ಸಿಬ್ಬಂದಿಗೆ ಏರ್ಪಡಿಸಿದ್ದ ತರಬೇತಿ ಶಿಬಿರದಲ್ಲಿ ಮಾತನಾಡಿ, ಡಿ. 21ರ ಭಾನುವಾರ ಎಲ್ಲಾ ಕಡೆ ಲಸಿಕಾ ಬೂತ್‌ಗಳಿಗೆ ಪೋಷಕರು ತಮ್ಮ ಮಕ್ಕಳನ್ನು ಕರೆದುಕೊಂಡು ಬಂದು ಲಸಿಕೆ ಹಾಕಿಸಬೇಕು.

ಮಾರನೇ ದಿನ ಲಸಿಕಾ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ, ಪ್ರತಿ ಮಗುವು ಲಸಿಕೆ ಹಾಕಿಸಿಕೊಂಡಿರುವುದನ್ನು ಖಾತ್ರಿ ಪಡಿಸಿಕೊಳ್ಳಬೇಕು. ಆ ಸಮಯದಲ್ಲಿ ಲಸಿಕೆಯಿಂದ ವಂಚಿತರಾಗಿದ್ದ ಮಗು ಪತ್ತೆಯಾದರೆ ತಕ್ಷಣ ಲಸಿಕೆ ಹಾಕುವಂತೆ ಸೂಚಿಸಿದರು.

ಜುಟ್ಟನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ಡಾ. ಭರತ್ ಮಾತನಾಡಿ, ಪೋಲಿಯೋ ಮುಕ್ತ ಭಾರತ ಅಗುವುದಕ್ಕೆ ಎಲ್ಲರೂ ಸಹಕಾರ ಅಗತ್ಯ, ಸಾರ್ವಜನಿಕರು ಆರೋಗ್ಯ ಇಲಾಖೆಯೊಂದಿಗೆ ಸಹಕರಿಸಿ ಎಂದರು.

ಆರೋಗ್ಯ ಇಲಾಖೆಯ ಹಿರಿಯ ಆರೋಗ್ಯ ನಿರೀಕ್ಷಕ ಶಂಕರೇಗೌಡ, ಆರೋಗ್ಯ ಕಾರ್ಯಕರ್ತೆಯರಾದ ಜಯಶೀಲ, ಶುಭಾ, ಕವಿತಾ, ನಂದಿನಿ ಅವರು ಅನುಸರಿಸಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಆರೋಗ್ಯ ಇಲಾಖೆಯ ಸಿಬ್ಬಂದಿ, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ತರಬೇತಿ ಶಿಬಿರದಲ್ಲಿ ಭಾಗವಹಿಸಿದ್ದರು.

# ಅಪಾಯ ಹಂತದಲ್ಲಿ ಭಾರತದ ಪ್ರಜಾಪ್ರಭುತ್ವ

## ಬಿಎಸ್‌ಪಿ ರಾಜ್ಯ ಸಂಯೋಜಕ ಗಂಗಾಧರ್ | ಆರ್ಥಿಕ ಸಹಯೋಗ ದಿವಸ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಬೇಲೂರು: ದೇಶದಲ್ಲಿ ಪ್ರಜಾಪ್ರಭುತ್ವ ಅಸ್ಥಿರ ಸ್ಥಿತಿ ತಲುಪಿದ್ದು ನೋಟು ಕೊಟ್ಟು ಓಟು ಖರೀದಿಸುವ ಜನಪ್ರತಿನಿಧಿಗಳು ಗೆಲುವಿನ ಬಳಿಕ ಖರ್ಚು ಮಾಡಿದ ಹಣ ಗಳಿಕೆಗಾಗಿ ಶ್ರಮ ವಹಿಸುತ್ತಿದ್ದಾರೆ ಎಂದು ಎಂದು ಬಿಎಸ್ಪಿ ರಾಜ್ಯ ಸಂಯೋಜಕ ಗಂಗಾಧರ್ ಬಹುಜನ್ ಆಕ್ರೋಶ ವ್ಯಕ್ತಪಡಿಸಿದರು.

ಬೇಲೂರು ವಿಧಾನಸಭಾ ಕ್ಷೇತ್ರ ಸಮಿತಿಯ ವತಿಯಿಂದ ಬಿಕ್ಕೋಡು ಹೋಬಳಿಯಲ್ಲಿ ಹಮ್ಮಿಕೊಂಡಿದ್ದ ಆರ್ಥಿಕ ಸಹಯೋಗ ದಿವಸ್ ಆಂದೋಲನದಲ್ಲಿ ಮಾತನಾಡಿ, ಸ್ವತಂತ್ರ ಬಂದಾಗಿನಿಂದಲೂ ಮನುವಾದಿ ಪಕ್ಷಗಳು ಜನಸಾಮಾನ್ಯರ ಮೂಲಭೂತ ಸಮಸ್ಯೆಗಳ ಬಗ್ಗೆ ಗಮನಹರಿಸದೆ ಕೇವಲ ಅಧಿಕಾರಕ್ಕೋಸ್ಕರ ಹಣ ವ್ಯಯ ಮಾಡಿ ಚುನಾವಣೆಗಳಲ್ಲಿ ಗೆದ್ದು ಬರುತ್ತಾರೆ. ಈ ಕಾರಣದಿಂದಾಗಿ ಜನರ ಹಿತಾಸಕ್ತಿಗಳನ್ನು ಗಣನೆಗೆ ತೆಗೆದುಕೊಳ್ಳದೆ ನಿರ್ಲಕ್ಷಿಸಲಾಗಿದೆ. ಮನುವಾದಿ ಪಕ್ಷಗಳು ಬಂಡವಾಳ ಶಾಹಿಗಳಿಂದ ಸಾವಿರಾರು ಕೋಟಿ ರೂಪಾಯಿ ಹಣವನ್ನು ದೇಣಿಗೆಯಾಗಿ ಪಡೆದು ಆ ಹಣದಿಂದಲೇ ಜನರಿಗೆ ಹಣ, ಹೆಂಡ-ಸಾರಾಯಿ, ಸೀರೆ-ಪಂಚೆ, ಬಿರಿಯಾನಿ ಹಂಚಿ ಮುಗ್ಧ ಮತದಾರರ ಓಟು ಖರೀದಿಸಿ ಅಧಿಕಾರದ ಚುಕ್ಕಾಣಿ ಹಿಡಿದ ಮನುವಾದಿ ಕಾಂಗ್ರೆಸ್ ಬಿಜೆಪಿ ಪಕ್ಷಗಳು ತಮಗೆ ದೇಣಿಗೆ ನೀಡಿದ ಬಂಡವಾಳ ಶಾಹಿಗಳ ಪರವಾದ ನೀತಿ ನಿಯಮಗಳನ್ನು ರೂಪಿಸುತ್ತಾರೆ ಎಂದು ಆರೋಪಿಸಿದರು.

ಬಹುಜನ ಸಮಾಜ ಪಾರ್ಟಿಯು ತನ್ನ ಚುನಾವಣೆ ಖರ್ಚನ್ನು ಯಾವುದೇ ಬಂಡವಾಳ ಶಾಹಿಗಳಿಂದ ಪಡೆಯದೇ ಜನಸಾಮಾನ್ಯರಿಂದಲೇ ಆರ್ಥಿಕ ಸಹಯೋಗ ಆಂದೋಲನದ ಮೂಲಕ ಸಂಗ್ರಹಿಸಿ, ಚುನಾವಣೆ ನಡೆಸಿ ಜನಪರ ಆಡಳಿತ ನಡೆಸುವ ಮಹತ್ತರ ಉದ್ದೇಶ ಹೊಂದಿರುವ ಏಕೈಕ ಪಕ್ಷವಾಗಿದೆ. ಈ ಪ್ರಯೋಗವನ್ನು ಕಾನ್ಸಿರಾಂ ಮತ್ತು ಮಾಯಾವತಿ ಉತ್ತರ ಪ್ರದೇಶದಲ್ಲಿ ಕೈಗೊಂಡು ಯಶಸ್ವಿಯಾಗಿದ್ದಾರೆ ಎಂದರು.

ರಾಜ್ಯ ಬಿಎಸ್ಪಿ ಉಸ್ತುವಾರಿ ದಿನೇಶ್ ಗೌತಮ್ ಮಾತನಾಡಿ, ಬಾಬಾ ಸಾಹೇಬ್ ಅಂಬೇಡ್ಕರ್ ಮತ್ತು ಕಾನ್ಶಿರಾಂ ಅವರ ಕನಸನ್ನು ಮನಸು ಮಾಡುವ ಸಲುವಾಗಿ ಮುಂದಿನ ಚುನಾವಣೆಯಲ್ಲಿ ಕರ್ನಾಟಕದಲ್ಲಿಯೂ ಉತ್ತರಪ್ರದೇಶದ ಮಾದರಿಯಲ್ಲಿ ಪಕ್ಷವನ್ನು ಸಂಘಟನೆ ಮಾಡಿ ಅಧಿಕಾರಕ್ಕೆ ತರಲು ಪ್ರಯತ್ನಿಸಲಾಗುತ್ತಿದೆ. ಕಳೆದ ಎರಡು ಮೂರು ದಶಕಗಳಿಂದ ಕರ್ನಾಟಕ ರಾಜ್ಯದಲ್ಲಿ ಬಹುಜನ ಸಮಾಜ ಪಕ್ಷವನ್ನು ಪ್ರಾಮಾಣಿಕವಾಗಿ ಕಟ್ಟುತ್ತಿರುವ ಗಂಗಾಧರ್ ಬಹುಜನ್ ಅವರನ್ನು ಕ್ಷೇತ್ರದ ಮತದಾರರು ಗೆಲ್ಲಿಸಬೇಕು ಎಂದು ಕೋರಿದರು.

ಆಂದೋಲನದಲ್ಲಿ ಜಿಲ್ಲಾ ಕಾರ್ಯದರ್ಶಿ ರಾಜು ಬೆಳ್ಳೊಟ್ಟೆ, ಜಿಲ್ಲಾ ಕಚೇರಿ ಕಾರ್ಯದರ್ಶಿ ಕಿರಣ್ ಕುಮಾರ್, ಜಿಲ್ಲಾ ಬಿವಿಫ್ ಸಂಯೋಜಕ ಹೇಮಂತ್ ನಿಟ್ಟೂರು, ರಾಜೇಶ್ ಸಾಣೇನಹಳ್ಳಿ, ಉಮೇಶ್, ಪ್ರಕಾಶ್ ಕೆಸಗೋಡ್, ಮಂಜುನಾಥ್, ನಿಂಗರಾಜು, ಜಯಲಕ್ಷ್ಮಿ ಇತರರಿದ್ದರು.

# ಮೂರ್ಛೆ ರೋಗ ಕುರಿತು ಜಾಗೃತಿ ಅತ್ಯವಶ್ಯ




ಹಾಸನ: ಮೂರ್ಛೆ ರೋಗ ವ್ಯಕ್ತಿಗೆ ಕಬ್ಬಿಣದ ಕೀಲಿ ಕೈಗೆ ಕೊಡುವುದು ಮತ್ತು ಅಪಸ್ಮಾರ ಸಮಯದಲ್ಲಿ ಅವರಿಗೆ ನೀರು ಕುಡಿಸುವುದು ತಪ್ಪು. ಹೀಗೆ ಮಾಡುವುದರಿಂದ ರೋಗಿಗಳ ಹತ್ತಿರ ಇರುವವರಿಗೂ ತೊದರೆಯಾಗುವ ಸಾಧ್ಯತೆಯಿದೆ ಎಂದು ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ. ನಾಗೇಶ್ ಆರಾಧ್ಯ ತಿಳಿಸಿದರು.

ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಟಾರ್ಗೆಟ್ ಪಿ.ಯು.ಕಾಲೇಜು, ಸಂಯುಕ್ತಾಶ್ರಯದಲ್ಲಿ ಟಾರ್ಗೆಟ್ ಪಿ.ಯು.ಕಾಲೇಜ್‌ನಲ್ಲಿ ಏರ್ಪಡಿಸಿದ್ದ ರಾಷ್ಟ್ರೀಯ ಅಪಸ್ಮಾರ ದಿನದ ಅಂಗವಾಗಿ ಪೋಸ್ಟರ್ ತಯಾರಿಕ ಕಾರ್ಯಕ್ರಮ ಉದ್ಘಾಟಿಸಿ, ಮೂರ್ಛೆ ರೋಗಕ್ಕೆ ಸೂಕ್ತ ಸಮಯಕ್ಕೆ ಚಿಕಿತ್ಸೆ ಕೊಡಿಸುವುದು ಮುಖ್ಯ. ಮೂರ್ಛೆ ರೋಗಕ್ಕೂ ಮದ್ದು ಇದೆ ಎಂದು ತಿಳಿಸಿದರು. ಪೋಸ್ಟರ್ ತಯಾರಕರು ಸ್ಪರ್ಧೆಯಲ್ಲಿ ಬಹುಮಾನ ಪಡೆದ ವಿದ್ಯಾರ್ಥಿಗಳನ್ನು ಅಭಿನಂದಿಸಿದರು. ಪೋಸ್ಟರ್ ಸಿದ್ಧಪಡಿಸುವ ಸಾಧ್ಯವಾದಷ್ಟು ಚಿತ್ರಗಳನ್ನು ಬಳಸಿಕೊಂಡು ವಿಷಯಗಳನ್ನು ತಿಳಿಸುವ ಪ್ರಯತ್ನ ಮಾಡಬೇಕು ಮತ್ತು ಪೋಸ್ಟರ್‌ಗಳಲ್ಲಿ ಪದಗಳನ್ನು ಕಡಿಮೆ ಬಳಸಿದಷ್ಟು ಉತ್ತಮವಾಗಿರುತ್ತದೆ ಎಂದು ತಿಳಿಸಿದರು.

ಕರ್ನಾಟಕ ಮೆದುಳಿನ ಆರೋಗ್ಯ ಉಪಕ್ರಮದ ಜಿಲ್ಲಾ ಸಂಯೋಜಕರಾದ ಲತಾಮಣಿ ಮಾತನಾಡಿ, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾಸ್ಪತ್ರೆಯ ಮೊದಲನೆ ಮಹಡಿ, ಕೊಠಡಿ ಸಂಖ್ಯೆ 13 ಡಿಯಲ್ಲಿ ಬ್ರೈನ್ ಹೆಲ್ತ್ ಕ್ಲಿನಿಕ್ ಅನ್ನು ಸ್ಥಾಪಿಸಿದ್ದು ಇಲ್ಲಿ ವಿಶೇಷವಾಗಿ ಪಾರ್ಶ್ವವಾಯು, ಮೂರ್ಛೆ ರೋಗ, ತಲೆನೋವು ಮತ್ತು ಮರೆವಿನ ಕಾಯಿಲೆಗಳಿಗೆ ಚಿಕಿತ್ಸೆ ಲಭ್ಯವಿದ್ದು ನಮ್ಮಲ್ಲಿ ನರರೋಗ ತಜ್ಞರು, ಸ್ಪೀಚ್ ಥೆರಪಿಸ್ಟ್, ಸೈಕಾಲಾಜಿಸ್ಟ್ ಫಿಜಿಯೋಥೆರಪಿಸ್ಟ್ ನರ್ಸ್ ಲಭ್ಯವಿದ್ದು ಮೇಲಿನ ಖಾಯಿಲೆಗಳಿಗೆ ಚಿಕಿತ್ಸೆ ಉಚಿತವಾಗಿರುತ್ತದೆ ಎಂದು ತಿಳಿಸಿದರು.

# ಬೇಲೂರು ಚನ್ನಕೇಶವ ದೇವಸ್ಥಾನ ವ್ಯವಸ್ಥೆ ಪರಿಶೀಲಿಸಿದ ಜಿಲ್ಲಾಧಿಕಾರಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಬೇಲೂರು: ಐತಿಹಾಸಿಕ ಚನ್ನಕೇಶವ ದೇವಸ್ಥಾನಕ್ಕೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಭೇಟಿ ನೀಡಿ ಮೂಲಸೌಕರ್ಯಗಳ ಪಾರ್ಕಿಂಗ್ ವ್ಯವಸ್ಥೆ, ಸಾರ್ವಜನಿಕ ಶೌಚಾಲಯ ಸೇರಿದಂತೆ ಇನ್ನಿತರ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸಿದರು.

ದೇವಸ್ಥಾನದ ಮುಂಭಾಗ ಹಾಗೂ ಸುತ್ತಲಿನ ಪ್ರದೇಶಗಳಲ್ಲಿ ವಾಹನ ನಿಲುಗಡೆ ವ್ಯವಸ್ಥೆ ಸಮರ್ಪಕವಾಗಿದೆಯೇ, ಭಕ್ತರಿಗೆ ಯಾವುದೇ ಅಸೌಕರ್ಯ ಉಂಟಾಗುತ್ತಿದೆಯೇ ಎಂಬುದನ್ನು ಪರಿಶೀಲಿಸಿದರು. ಜೊತೆಗೆ ಸಾರ್ವಜನಿಕ ಶೌಚಾಲಯಗಳ ಸ್ವಚ್ಛತೆ, ನೀರಿನ ಲಭ್ಯತೆ, ನಿರ್ವಹಣೆಯ ಸ್ಥಿತಿ ಬಗ್ಗೆ ಮಾಹಿತಿ ಪಡೆದು, ಅಗತ್ಯವಿರುವ ಕಡೆಗಳಲ್ಲಿ ತಕ್ಷಣ ಸುಧಾರಣೆ ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುವ ಹಿನ್ನೆಲೆ ಮೂಲಭೂತ ಸೌಕರ್ಯ ಉತ್ತಮವಾಗಿರಬೇಕು. ವಿಶೇಷವಾಗಿ ಹಬ್ಬ ಹಾಗೂ ಪ್ರವಾಸಿಗರ ಭಾರ ಹೆಚ್ಚಾಗುವ ದಿನಗಳಲ್ಲಿ ಯಾವುದೇ ಸಮಸ್ಯೆ ಉಂಟಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪ್ರತಿ ಮಂಗಳವಾರ ಒಂದೊಂದು ಸ್ಥಳಗಳಿಗೆ ಭೇಟಿ ನೀಡುತ್ತಿದ್ದು ಮೇಲಧಿಕಾರಿಗಳು ಭೇಟಿ ನೀಡಿದಾಗ ಮಾತ್ರ ಸ್ವಚ್ಛತೆಗೆ ಆದ್ಯತೆ ನೀಡಬಾರದು. ಸೌಕರ್ಯಗಳ ಕೊರತೆ ಶೌಚಾಲಯ ನಿರ್ವಹಣೆ ಹಾಗೂ ಪಾರ್ಕಿಂಗ್ ವ್ಯವಸ್ಥೆ ಕಸದ ತ್ಯಾಜ್ಯ ನಿರ್ವಹಣೆಗಳ ಕುರಿತು ಮಾಹಿತಿ ಪಡೆದಿದ್ದೇನೆ. ಅದರಂತೆ ಇಲ್ಲಿ ಬೇಕಾಗಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಕೆಲಸ ನಿರ್ವಹಿಸಲು ಹಾಗೂ ಭಕ್ತರಿಗೆ ಪ್ರವಾಸಿಗಳಿಗೆ ಯಾವುದೇ ರೀತಿ ಅನಾನುಕೂಲವಾಗದಂತೆ ಅವರಿಗೆ ಬೇಕಾದ ಸೌಕರ್ಯಗಳನ್ನು ಸಂಬಂಧಪಟ್ಟ ಅಧಿಕಾರಿಗಳು ತಿಳಿಸಿದ್ದಾರೆ. ಪಾರ್ಕಿಂಗ್ ಹಿಂದುಗಡೆ ಇರುವ ಜಾಗವನ್ನು ಪರಿಶೀಲಿಸಿ ಅಲ್ಲಿ ಒಂದು ಹೆಚ್ಚುವರಿಯಾಗಿ ಶೌಚಾಲಯ ಈಗ ಇರುವ ಶೌಚಾಲಯದ ನಿರ್ವಹಣೆ ಸಮಯ ಬದಲಾವಣೆ ಕುರಿತು ಅವರಿಗೆ ಸ್ಪಷ್ಟವಾಗಿ ವಿವರಿಸಿದ್ದೇನೆ ಎಂದು ತಿಳಿಸಿದರು. ತಹಸೀಲ್ದಾರ್ ಶ್ರೀಧರ್ ಕಂಕಣವಾಡಿ, ದೇವಸ್ಥಾನ ಕಾರ್ಯನಿರ್ವಹಣಾ ಅಧಿಕಾರಿ ಯೋಗೀಶ್, ಪುರಸಭೆ ಅಧ್ಯಕ್ಷೆ ಉಷಾ ಸತೀಶ್, ಸೌಮ್ಯ ಆನಂದ್, ವೃತ್ತ ನಿರೀಕ್ಷಕ ರೇವಣ್ಣ, ಸಕಲೇಶಪುರ ಉಪ ವಿಭಾಗಾಧಿಕಾರಿ ರಾಜೇಶ್ ಇತರರಿದ್ದರು.

# ಪಶ್ಚಿಮಘಟ್ಟ ಭಾಗದಲ್ಲಿ ರೈಲು ಸಂಚಾರ ಪುನಾರಂಭ

ಹಾಸನ: ಪಶ್ಚಿಮಘಟ್ಟ ವ್ಯಾಪ್ತಿಯ ಸಕಲೇಶಪುರ ರೈಲ್ವೆ ಮಾರ್ಗದ ವಿದ್ಯುದೀಕರಣ ಮತ್ತು ಇತರೆ ಕಾಮಗಾರಿಗಳ ಕಾರಣದಿಂದಾಗಿ ಕಳೆದ 6 ತಿಂಗಳಿಂದ ರದ್ದಾಗಿದ್ದ ರೈಲು ಸಂಚಾರವನ್ನು ಪ್ರಾರಂಭಿಸುವ ಮೂಲಕ ಪ್ರಯಾಣಿಕರಿಗೆ ಸೇವೆ ನೀಡಲು ಸಿದ್ಧವಾಗಿದೆ.




ಆರು ತಿಂಗಳ ಹಿಂದೆ ರದ್ದಾಗಿದ್ದ ಬೆಂಗಳೂರು-ಮಂಗಳೂರು-ಕಾರವಾರ ರೈಲು ಸೇವೆ ಪುನಾರಂಭಗೊಳಿಸುವುದಾಗಿ ರೈಲ್ವೆ ಇಲಾಖೆ ಅಧಿಕೃತ ಮಾಹಿತಿ ನೀಡಿದೆ. ಬೆಂಗಳೂರು-ಮಂಗಳೂರು-ಕಾರವಾರ ರೈಲು ಸೇವೆಯಲ್ಲಿ ಹಲವು ಸುಧಾರಣೆಗಳನ್ನು ತರಲಾಗಿದೆ. ಈ ಮೂಲಕ ಮಂಗಳವಾರದಿಂದ ಗೊಮ್ಮಟೇಶ್ವರ ಎಕ್ಸ್‌ಪ್ರೆಸ್ ರೈಲು (16575/16576) ಮತ್ತೆ ತನ್ನ ಸೇವೆ ಮುಂದುವರಿಸಿದೆ. ಮೊದಲಿನಂತೆ ತನ್ನ ಸಂಚಾರವನ್ನು ಯಶವಂತಪುರ ನಿಲ್ದಾಣದಿಂದ ಆರಂಭಿಸಲಿದೆ. ಪ್ರಯಾಣಿಕರು ಈ ರೈಲ್ವೆ ಸಂಚಾರ ಸೇವೆಯನ್ನು ಸದುಪಯೋಗ ಮಾಡಿಕೊಳ್ಳುವಂತೆ ರೈಲ್ವೆ ಇಲಾಖೆ ತಿಳಿದೆ. ಇದು ಧರ್ಮಸ್ಥಳ, ಕುಕ್ಕೆ ಸುಬ್ರಮಣ್ಯ, ಶ್ರವಣಬೆಳಗೊಳ ಸೇರಿ ಹಲವು ಕ್ಷೇತ್ರಕ್ಕೆ ಹೋಗುವವರಿಗೆ ಸಹಾಯವಾಗಲಿದೆ.

ಗೊಮ್ಮಟೇಶ್ವರ ಎಕ್ಸ್‌ಪ್ರೆಸ್ ರೈಲಿನಲ್ಲಿ ಹಲವು ಸುಧಾರಣೆಗಳನ್ನು ತರಲಾಗಿದೆ. ಇನ್ನು ಈ ರೈಲು ಬೆಳಗ್ಗಿನ ಹೊತ್ತು ಸಂಚಾರಿಸುವ ಕಾರಣ, ಪ್ರಯಾಣಿಕರು ಪ್ರಕೃತಿಯನ್ನು ವೀಕ್ಷಿಸಲು ವಿಸ್ಟಾಡೋಮ್ ಕೋಚ್, ಗಾಜಿನ ಕಿಟಕಿ, ಬೃಹತ್ ಗಾಜಿನ ಛಾವಣಿ, ವ್ಯವಸ್ಥಿತ ಆಸನಗಳನ್ನು ಮಾಡಲಾಗಿದೆ. ಹಾಗಾಗಿ ಹಾಸನ, ಸಕಲೇಶಪುರ, ಸುಬ್ರಹ್ಮಣ್ಯ, ಮಂಗಳೂರು ಮಾರ್ಗದುದ್ದಕ್ಕೂ ಪ್ರಕೃತಿಯನ್ನು ನೋಡಿಕೊಂಡು ಹೋಗಬಹುದು.

### ಸಮಯದಲ್ಲಿ ಬದಲಾವಣೆ ಇಲ್ಲ

ಗೊಮ್ಮಟೇಶ್ವರ ಎಕ್ಸ್‌ಪ್ರೆಸ್ ರೈಲಿನಲ್ಲಿ ಸಮಯದಲ್ಲಿ ಯಾವುದೇ ಬದಲಾವಣೆ ಮಾಡಿಕೊಂಡಿಲ್ಲ. ಸಂಚಾರ ಮಾರ್ಗದಲ್ಲೂ ಯಾವುದೇ ಬದಲಾವಣೆಯಾಗಿಲ್ಲ. ಆದರೆ, ನಿಲ್ದಾಣದಲ್ಲಿ ನಿಲ್ಲುವ ಸಮಯದಲ್ಲಿ ಬದಲಾವಣೆಯನ್ನು ಮಾಡಿಕೊಂಡಿದೆ. ಯಶವಂತಪುರ ನಿಲ್ದಾಣದಿಂದ ಹೊರಟು ಚಿಕ್ಕಬಾಣಾವರ, ಹಾಸನ, ಶ್ರವಣಬೆಳಗೊಳ, ಸಕಲೇಶಪುರ, ಸುಬ್ರಹ್ಮಣ್ಯ ರಸ್ತೆ, ಕಬಕಪುತ್ತೂರು, ಬಂಟ್ವಾಳ ಮೂಲಕ ಮಂಗಳೂರಿಗೆ ಹೋಗುತ್ತದೆ. ಅಲ್ಲಿಂದ ಶ್ರವಣಬೆಳಗೊಳ ನಿಲ್ದಾಣದಲ್ಲಿ ನಿಲ್ಲುತ್ತದೆ. ರೈಲು ಹಾಸನ ಮತ್ತು ಸಕಲೇಶಪುರದಲ್ಲಿ ಹೆಚ್ಚು ಸಮಯ ನಿಲ್ಲುತ್ತದೆ.

# ರಾಷ್ಟ್ರ ಮಟ್ಟದ ಕ್ರೀಡಾಕೂಟ: ಶಿಕ್ಷಕಿ ರಾಣಿಗೆ 4ನೇ ಸ್ಥಾನ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಬಿಹಾರದ ಪಾಟ್ನಾದಲ್ಲಿ ನಡೆದ ಅಖಿಲ ಭಾರತ ನಾಗರಿಕ ಸೇವಾ ಅಥ್ಲೆಟಿಕ್ಸ್ ಸ್ಪರ್ಧೆಯಲ್ಲಿ ಸಕಲೇಶಪುರ ತಾಲ್ಲೂಕು ಚಂಗಡಿಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪ್ರಭಾರ ಮುಖ್ಯ ಶಿಕ್ಷಕಿ ಸಿ.ಟಿ.ರಾಣಿ ಅವರು 4★100 ಮೀ. ರಿಲೇ ಕ್ರೀಡಾಕೂಟದಲ್ಲಿ ನಾಲ್ಕನೇ ಸ್ಥಾನ ಪಡೆದಿದ್ದಾರೆ. ಯುವಜನ ಸಬಲೀಕರಣ ಇಲಾಖೆಯಿಂದ ಇತ್ತೀಚೆಗೆ ನಡೆದಿದ್ದ ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ 100 ಮೀ. ಓಟ, 4★100 ಮೀ. ರಿಲೇಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದರು.

ಹಾಸನದಲ್ಲಿ ನಡೆದ ರಾಜ್ಯ ಮಟ್ಟದ ಕ್ರೀಡಾಕೂಟದಲ್ಲಿ ಲಾಂಗ್ ಜಂಪ್, ರಿಲೇ ಹಾಗೂ 1 ಸಾವಿರ ಮೀ. ಓಟದಲ್ಲಿ ಪ್ರಥಮ ಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದರು. 2023ರಲ್ಲಿ ತಾಲ್ಲೂಕು ಮಟ್ಟದ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿಗೆ ಭಾಜನರಾಗಿದ್ದ ರಾಣಿ ಅವರು ರಾಷ್ಟ್ರ ಮಟ್ಟದ ಕ್ರೀಡಾಕೂಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

# ಡಿ. 23ಕ್ಕೆ ಆಟೋ ಚಾಲಕರ ಸಂಘಕ್ಕೆ ಚುನಾವಣೆ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಮಲೆನಾಡು ಆಟೋ ಚಾಲಕರ ಸಂಘದ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಚುನಾವಣೆಯು ಡಿ. 23ರಂದು ಪಟ್ಟಣದ ಎಪಿಎಂಸಿ ಆವರಣದಲ್ಲಿ ನಡೆಯಲಿದೆ ಎಂದು ಚುನಾವಣಾ ಮೇಲ್ವಿಚಾರಣಾ ಸಮಿತಿ ಅಧ್ಯಕ್ಷ ತಮ್ಮಣ್ಣಗೌಡ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಂಗಳವಾರ ಬೆಳಿಗ್ಗೆ 9 ರಿಂದ ಮಧ್ಯಾಹ್ನ 3 ಗಂಟೆ ವರೆಗೆ ನಡೆಯಲಿದ್ದು, ಎಪಿಎಂಸಿ ಮಾರುಕಟ್ಟೆ ಆವರಣದಲ್ಲಿ ಮತದಾನಕ್ಕೆ ವ್ಯವಸ್ಥೆ ಮಾಡಲಾಗಿದೆ. ಮತದಾನದ ದಿನವೇ ಫಲಿತಾಂಶ ಘೋಷಣೆ ಮಾಡಲಾಗುವುದು ಎಂದು ತಿಳಿಸಿದರು.

ಪ್ರಸ್ತುತ ಚಾಲ್ತಿಯಲ್ಲಿರುವ ಪ್ಯಾಸೆಂಜರ್ ಆಟೋ ಪರವಾನಗಿ ಹೊಂದಿರುವ ಚಾಲಕರಿಗೆ ಮಾತ್ರ ಮತದಾನದ ಹಕ್ಕು ಇರಲಿದೆ. ಮತದಾನ ದಿನ ನಕಲಿ ಮತದಾನ ನಡೆಸಿದಲ್ಲಿ ಅಂತಹವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಚುನಾವಣಾ ಫಲಿತಾಂಶದಲ್ಲಿ ಇಬ್ಬರು ಅಭ್ಯರ್ಥಿಗಳು ಸಮಬಲ ಸಾಧಿಸಿದಲ್ಲಿ ಲಾಟರಿ ಮೂಲಕ ಆಯ್ಕೆ ಮಾಡಲಾಗುವುದು. ಮತದಾನ ದಿನ ಚುನಾವಣಾ ಸಮಿತಿಯ ನಿರ್ಧಾರವೇ ಅಂತಿಮವಾಗಿರುತ್ತದೆ ಎಂದು ಸ್ಪಷ್ಟಪಡಿಸಿದರು.

ಮತದಾರರು ಚಾಲ್ತಿಯಲ್ಲಿರುವ ಮೂಲ ಆಟೋ ಪರವಾನಗಿಯನ್ನು ಹಾಗೂ ಒಂದು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ತರಬೇಕಾಗುತ್ತದೆ. ಸಕಲೇಶಪುರ ಪಟ್ಟಣದ ಜೊತೆಗೆ ಬಾಗೆ, ಮಾರನಹಳ್ಳಿ, ಸುಂಡೇಕೆರೆ ಹಾಗೂ ಹಾನುಬಾಳು ವ್ಯಾಪ್ತಿಯ ಚಾಲಕರು ಮತ್ತು ಮಾಲಿಕರು ಮತದಾನದಲ್ಲಿ ಭಾಗವಹಿಸಬಹುದಾಗಿದೆ. ಚಾಲ್ತಿಯಲ್ಲಿರುವ ಆಟೋ ವಾಹನ ಪರವಾನಗಿ ಆಧಾರದಲ್ಲೇ ಮತದಾನ ನಡೆಸಲಾಗುತ್ತದೆ ಎಂದು ತಿಳಿಸಿದರು.

ಚುನಾವಣಾ ಸಮಿತಿ ಉಪಾಧ್ಯಕ್ಷ ಸೈಯ್ಯದ್ ಫೈರೋಜ್, ಕಾರ್ಯದರ್ಶಿ ಪುಟ್ಟರಾಜು ಜಿ.ಕೆ ಹಾಗೂ ವೇದುನಂದನ್ ಬಿ. ಶೆಟ್ಟಿ, ರವಿ, ದೇವರಾಜು, ಛಾಯಾಪತಿ ಉಪಸ್ಥಿತರಿದ್ದರು.

# ಎಂಜಿನಿಯರಿಂಗ್ ವಿದ್ಯಾರ್ಥಿಗಳು ಗಣಿತ ವಿಷಯ ಅರಿಯಿರಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ತಂತ್ರಜ್ಞಾನ ಆಧಾರಿತ ಕ್ಷೇತ್ರಗಳಲ್ಲಿ ಗಣಿತ ವಿಷಯ ಅತ್ಯಂತ ಮಹತ್ವದ ಪಾತ್ರ ನಿಬಾಯಿಸುತ್ತದೆಂದು ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಅಧ್ಯಕ್ಷ ಆರ್.ಟಿ.ದ್ಯಾವೇಗೌಡ ಹೇಳಿದರು.

ನಗರದ ಮಲೆನಾಡು ತಾಂತ್ರಿಕ ಕಾಲೇಜಿನಲ್ಲಿ ವಿದ್ಯುತ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ ವಿಭಾಗದಿಂದ ಮಂಗಳವಾರ ಹಮ್ಮಿಕೊಂಡಿದ್ದ ವಿದ್ಯುತ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್‌ನಲ್ಲಿ ಗಣಿತದ ಅನ್ವಯಗಳು ವಿಷಯ ಕುರಿತ ಒಂದು ದಿನದ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿ, ವಿಜ್ಞಾನ-ತಂತ್ರಜ್ಞಾನದಲ್ಲಿ ಗಣಿತ ವಿಷಯ ಪ್ರಮುಖವಾದುದು. ವಿದ್ಯುತ್ ಮತ್ತು ಎಲೆಕ್ಟ್ರಾನಿಕ್ಸ್ ವಿಭಾಗದ ವಿದ್ಯಾರ್ಥಿಗಳಿಗೆ ಗಣಿತ ವಿಷಯದ ಪ್ರಯೋಜನದ ಬಗ್ಗೆ ವಿಷಯವಾರು ಪರಿಣತರು ತಮ್ಮ ಅಧ್ಯಯನದ ಅನುಭವ ಮತ್ತು ಪ್ರಯೋಜನದ ಬಗ್ಗೆ ಮಾಹಿತಿ ನೀಡಿದ್ದಾರೆ. ಈ ಕಾರ್ಯಾಗಾರ ವಿದ್ಯಾರ್ಥಿಗಳ ಶೈಕ್ಷಣಿಕ ಬದುಕಿಗೆ ಮತ್ತಷ್ಟು ನೆರವಾಗಲಿ ಎಂದು ಆಶಿಸಿದರು. ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಪ್ರಧಾನ ಕಾರ್ಯದರ್ಶಿ ಚೌಡಳ್ಳಿ ಜಗದೀಶ್ ಮಾತಾನಾಡಿ, ವಿದ್ಯಾರ್ಥಿಗಳಿಗೆ ಪಠ್ಯ ಅಧ್ಯಯನ ಜೊತೆಗೆ ಶಿಕ್ಷಣ ತಜ್ಞರ ಮೂಲಕ ಮಾಹಿತಿ ನೀಡುವ ಕೆಲಸವನ್ನು ನಿರಂತರವಾಗಿ ಮಾಡಲಾಗುತ್ತಿದೆ ಎಂದರು.

ಪ್ರಾಂಶುಪಾಲ ಡಾ. ಹೆಚ್. ಜೆ.ಅಮರೇಂದ್ರ, ಮಾತನಾಡಿ, ನಿರಂತರ ಕಲಿಕೆಗೆ ತರಬೇತಿ ಹಾಗೂ ಮಾರ್ಗದರ್ಶನದ ಅವಶ್ಯಕತೆ ಹೆಚ್ಚಿದೆ ಎಂದರು. ಗಣಿತ ವಿಭಾಗ ಮುಖ್ಯಸ್ಥೆ ಡಾ. ಜಿ.ಕೆ.ಕಲಾವತಿ, ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯ ಡಾ. ಅಶೋಕ್‌ರಾವ್, ಕಾಲೇಜಿನ ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ಅಧಿಕಾರಿ ಡಾ. ಇಂದ್ರ ಬಹುದ್ದೂರು, ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್ ವಿಭಾಗ ಮುಖ್ಯಸ್ಥ ಡಾ. ರಾಜಣ್ಣ, ಕಾರ್ಯಕ್ರಮ ಸಂಯೋಜಕ ಡಾ. ಎನ್.ಎಸ್.ಶಶಿಕುಮಾರ್, ಡಾ.ಜಿ.ಸಿ. ರೂಪ ಹಾಗೂ ಇತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಡಿಸೆಂಬರ್-18

1865: ಅಮೆರಿಕದಲ್ಲಿ ದಾಸ್ಯ ಪದ್ಧತಿಯನ್ನು ಅಂತ್ಯಗೊಳಿಸಿದ 13ನೇ ಸಂವಿಧಾನ ತಿದ್ದುಪಡಿ ಅಧಿಕೃತವಾಗಿ ಘೋಷಣೆ.

1917: ರಷ್ಯಾದಲ್ಲಿ ಬೋಲ್ಶೆವಿಕ್ ಕ್ರಾಂತಿಯ ನಂತರ ಹೊಸ ಆಡಳಿತ ವ್ಯವಸ್ಥೆ ಘೋಷಣೆ.

2001: ಭಾರತದ ಸಂಸತ್ತಿನ ಮೇಲೆ ನಡೆದ ಭಯೋತ್ಪಾದಕ ದಾಳಿಯ ಬಳಿಕ ರಾಷ್ಟ್ರವ್ಯಾಪಿ ಭದ್ರತಾ ಕ್ರಮಗಳು ಕಠಿಣಗೊಂಡವು

### ಜನನ

1878: ಜೋಸೆಫ್ ಸ್ಟಾಲಿನ್, ಸೋವಿಯತ್ ಯೂನಿಯನ್‌ನ ನಾಯಕ

1916: ಬೇಟಿ ಡೇವಿಸ್, ಖ್ಯಾತ ಅಮೆರಿಕನ್ ನಟಿ

### ಮರಣ

1913: ಚಾರ್ಲ್ಸ್ ಡಿಕನ್ಸ್, ವಿಶ್ವಪ್ರಸಿದ್ಧ ಇಂಗ್ಲಿಷ್ ಕಾದಂಬರಿಕಾರ

2008: ಮೇಜರ್ ಜನರಲ್ ಇಯಾನ್ ಕಾರ್ಡೋಸೊ, ಭಾರತೀಯ ಸೇನೆಯ ನಿವೃತ್ತ ಅಧಿಕಾರಿ

# ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಯಶಸ್ಸಿಗೆ ಕರೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಜಿಲ್ಲೆಯಲ್ಲಿರುವ ಐದು ವರ್ಷದೊಳಗಿನ ಪ್ರತಿಯೊಂದು ಮಕ್ಕಳಿಗೆ ಕಡ್ಡಾಯವಾಗಿ ಡಿ.21 ರಂದು ಪಲ್ಸ್ ಪೋಲಿಯೋ ಲಸಿಕೆ ಹಾಕಿಸುವುದರ ಮೂಲಕ ಲಸಿಕಾ ಅಭಿಯಾನ ಯಶಸ್ಸಿಗೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಯಾವುದೇ ಮಗುವು ಲಸಿಕೆಯಿಂದ ವಂಚಿತವಾಗದಂತೆ ನಿಗಾವಹಿಸಿ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಪರಿಣಾಮಯಾಗಿ ಅನುಷ್ಠಾನಗೊಳಿಸುವ ಮೂಲಕ ಶೇ. ನೂರರಷ್ಟು ಗುರಿ ಸಾಧಿಸಲು ನಿರ್ದೇಶನ ನೀಡಿದರು.

ಕೊಳಚೆ ಪ್ರದೇಶ, ವಲಸೆ ಕಾರ್ಮಿಕರು, ಕಟ್ಟಡ ಕಾರ್ಮಿಕರ ಮಕ್ಕಳಿಗೆ ಲಸಿಕೆ ತಪ್ಪದೆ ಎಚ್ಚರ ವಹಿಸಬೇಕು. ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ರೋಟರಿ, ಲಯನ್ಸ್ ಮತ್ತಿತರ ಸ್ವಯಂ ಸೇವಾ ಸಂಸ್ಥೆಗಳನ್ನು ಬಳಸಿಕೊಳ್ಳುವಂತೆ ತಿಳಿಸಿದರು.

ಬಸ್ ಮತ್ತು ರೈಲ್ವೆ ನಿಲ್ದಾಣಗಳಲ್ಲಿಯೂ ಲಸಿಕಾ ಬೂತ್‌ಗಳನ್ನು ತೆರೆಯುವಂತೆ ಸೂಚಿಸಿದರು. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜಾಥಾ ನಡೆಸುವ ಮೂಲಕ ಲಸಿಕಾ ಕಾರ್ಯಕ್ರಮ ನಡೆಯುವ ಕುರಿತು ಜನರಿಗೆ ಮಾಹಿತಿ ನೀಡಿ ಎಂದರಲ್ಲದೆ, ಪೋಸ್ಟರ್ ಹಾಗೂ ಬ್ಯಾನರ್ ಅಳವಡಿಸಿ ಜೊತೆಗೆ ಸಾಮಾಜಿಕ ಜಾಲತಾಣಗಳ ಮೂಲಕವು ಹೆಚ್ಚಿನ ಪ್ರಚಾರ ನೀಡುವಂತೆ ತಿಳಿಸಿದರು.

ಡಿ. 21 ರಂದು ಬೆಳಿಗ್ಗೆ 8 ಗಂಟೆಗೆ ಲಸಿಕಾ ಕಾರ್ಯಕ್ರಮವನ್ನು ಕೈಗೊಳ್ಳಲು ಶಾಲಾ ಕೊಠಡಿಗಳನ್ನು ತೆರೆದಿಡುವುದು ಹಾಗೂ ಪೋಲಿಯೋ ಲಸಿಕೆ ನೀಡಿಕೆಗಾಗಿ ಸಜ್ಜುಗೊಳಿಸುವುದು. ಪ್ರೌಢಶಾಲೆ, ಕಿರಿಯ ಮಹಾವಿದ್ಯಾಲಯ ಮತ್ತು ಪ್ರಥಮ ದರ್ಜೆ ಕಾಲೇಜುಗಳು ಇದ್ದ ಕಡೆ ಎನ್.ಎಸ್.ಎಸ್. ಮತ್ತು ಎನ್.ಸಿ.ಸಿ ವಿದ್ಯಾರ್ಥಿಗಳನ್ನು ಕಾರ್ಯಕ್ರಮ ಅನುಷ್ಠಾನಕ್ಕೆ ಸಹಕರಿಸಲು ನಿಯೋಜಿಸುವಂತೆ ತಿಳಿಸಿದರು.

ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಇರುವ ಗ್ರಾಮಗಳು, ಲಸಿಕೆ ನೀಡುವ ಸ್ಥಳ ಹಾಗೂ ದಿನಾಂಕವನ್ನು ಕರಪತ್ರದಲ್ಲಿ ಮುದ್ರಿಸಿ ವಿತರಿಸುವುದು. ಗ್ರಾಮ ಪಂಚಾಯಿತಿಗಳ ಮೂಲಕ ಪ್ರತಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಟಾಂ ಟಾಂ ಮೂಲಕ ಲಸಿಕಾ ದಿನಾ ಹಾಗೂ ಸ್ಥಳವನ್ನು ಪ್ರಚಾರ ಮಾಡುವಂತೆ ತಿಳಿಸಿದರು.

ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಇರುವ ಲಸಿಕಾ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ನೀರು ಮತ್ತು ಊಟದ ವ್ಯವಸ್ಥೆ ಮಾಡಬೇಕು. ಲಸಿಕಾ ದಿನ ಅಂಗನವಾಡಿ ಕೇಂದ್ರವನ್ನು ತೆರೆದಿಡಲು ಸೂಚಿಸುವುದು. ಮಕ್ಕಳಿಗೆ ಲಸಿಕೆ ಹಾಕಿಸುವುದು, ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು, ಮೇಲ್ವಿಚಾರಕರು ಲಸಿಕಾ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಮನೆಯಲ್ಲಿ ಹೆರಿಗೆಯಾದಲ್ಲಿ ಅಂತಹ ಮಗುವಿಗೆ ಪೋಲಿಯೋ ಲಸಿಕೆಯನ್ನು ನೀಡುವಂತೆ ತಿಳಿಸಿದರು.

ನಗರಸಭೆ, ಪುರಸಭೆಗಳ ವ್ಯಾಪ್ತಿಯಲ್ಲಿ, ಕೊಳಚೆ ಪ್ರದೇಶಗಳಲ್ಲಿ, ಎರಡು ಮೂರು ದಿನಗಳ ಮುಂಚಿತವಾಗಿ ಪ್ರಚಾರ ಮಾಡುವುದು, ಬ್ಯಾನರ್‌ಗಳನ್ನು ಬರೆಸಿ ಹಾಗೂ ಭಿತ್ತಿ ಪತ್ರಗಳನ್ನು ಮುದ್ರಿಸಿ ಪ್ರದರ್ಶಿಸುವಂತೆ ತಿಳಿಸಿದರು.

ಕಾರ್ಯಕ್ರಮಕ್ಕೆ ಬೇಕಾದ ವಾಹನಗಳನ್ನು ಬದಗಿಸುವ ಜವಾಬ್ದಾರಿಯನ್ನು ಸಾರಿಗೆ ಇಲಾಖೆ ನಿರ್ವಹಿಸುವಂತೆ ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳು, ಕಾಫಿ ತೋಟದ ಕಾರ್ಮಿಕರ ಮಕ್ಕಳು, ಕಬ್ಬು ಖಟಾಯಿಸುವ ಕಾರ್ಮಿಕ ಮಕ್ಕಳು. ಗಣಿಗಾರಿಕೆ ಕಾರ್ಮಿಕರ ಮಕ್ಕಳು, ಜಲ್ಲಿ ಒಡೆಯುವ ಕಾರ್ಮಿಕ ಮಕ್ಕಳು, ಕುರಿ ಕಾಯುವವರು ಹಾಗೂ ಇತರೇ ವಲಸೆ ಪ್ರದೇಶಗಳಲ್ಲಿ 0-5 ವರ್ಷದೊಳಗಿನ ಮಕ್ಕಳನ್ನು ಗುರುತಿಸಿ ಲಸಿಕೆ ಹಾಕಿಸುವಂತೆ ಕ್ರಮ ವಹಿಸಲು ಸೂಚಿಸಿದರು.

ಲಸಿಕೆಯನ್ನು ಸುರಕ್ಷಿತವಾಗಿಡಲು ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆರೋಗ್ಯ ಕೇಂದ್ರದ ಪ್ರದೇಶಗಳಲ್ಲಿ ಪಲ್ಸ್ ಪೋಲಿಯೋ ದಿನಾಂಕದ ಹಿಂದಿನ ಒಂದು ವಾರದಿಂದ ಮುಂದಿನ ಮೂರು ದಿನಗಳ ವರೆಗೆ ವಿದ್ಯುಚ್ಛಕ್ತಿ ನಿರಂತರವಾಗಿ ಸರಬರಾಜು ಮಾಡುವಂತೆ ಕ್ರಮವಹಿಸುವಂತೆ ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅನಿಲ್ ಮತ್ತಿತರರು ಇದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248